ಅಸಲು ದಾವಾ ಸಂಖ್ಯೆ - 69/2018
ಪಿಡಬ್ಲ್ಯು - 01
ದಿನಾಂಕಃ 01.07.2023
ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

**ಮುಖ್ಯ ವಿಚಾರಣೆ - ಶ್ರೀ ಜಿ ಎಂ ಎಂ ವಕೀಲರಿಂದ.**

ಈ ದಾವೆಯಲ್ಲಿ ನಾನು ವಾದಿಯಾಗಿದ್ದು ಇಂದು ನಾನು ನನ್ನ ಮೌಖಿಕ ಸಾಕ್ಷ್ಯದ ಬದಲು ಈ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಇದರಲ್ಲಿ ಬರೆದ ಎಲ್ಲ ವಿಷಯ ನಿಜ ಮತ್ತು ಸರಿ ಇದ್ದು ನನಗೆ ಗೊತ್ತಿದೆ.

ನಾನು ಈ ಕೆಳಕಂಡ ದಸ್ತಾವೇಜುಗಳನ್ನು ಹಾಜರು ಪಡಿಸಿದ್ದೇನೆ.

ಚಿಲ್ಲೂರು ಬಡ್ನಿ ಗ್ರಾಮದ ಸರ್ವೆ ನಂ.139/2ಎ ಇದರ ಪಹಣಿ ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಖಾತೆ ಉತಾರೆ ದೃಡಿಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಎಂ ಆರ್ ನಂ.ಹೆಚ್ 43/2016-17 ರ ದೃಡಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

ಪಿ ಟಿ ಶೀಟಿನ ದೃಡಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಅಸಲು ದಾವೆ ನಂ.22/2017 ರಲ್ಲಿಯ ಡಿಕ್ರಿಯ ದೃಡಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ನೋಟಿಸಿನ ಕಚೇರಿ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

13 ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-7 ರಿಂದ 19 ಎಂದು ಗುರುತಿಸಲಾಯಿತು.

13 ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-20 ರಿಂದ 32 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು.ಸವಣೂರು